# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಚಾಮರಾಜನಗರ ಜಿಲ್ಲೆಯಲ್ಲಿರುವ ಸಣ್ಣ ಕೆರೆಗಳ ಹೂಳೆತ್ತುವ ಬಗ್ಗೆ.

ಓದಲಾಗಿದೆ: ಭರವಸೆ ಸಂಖ್ಯೆ:114(ಎ)12/2006.

ಪ್ರಸ್ತಾವನೆ:

ಚಾಮರಾಜನಗರ ಜಿಲ್ಲೆಯಲ್ಲಿ 2011-12ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಸಣ್ಣ ಕೆರೆಗಳ ಹೂಳೆತ್ತುವ ಕಾಮಗಾರಿಗಳಲ್ಲಿ ಲೋಪದೋಷಗಳು ಹಾಗೂ ಹಣ ದುರುಪಯೋಗ ಕುರಿತು ವಿಧಾನ ಸಭೆ ಭರವಸೆ ಸಮಿತಿಯಲ್ಲಿ ಪ್ರಸ್ತಾಪಿಸಲಾಗಿದ್ದು. ಈ ಕುರಿತು ಸಮಗ್ರ ತನಿಖೆ ನಡೆಸಿ ವರದಿ ನೀಡಲು ಕೋರಿ ಸದರಿ ಭರವಸೆಯನ್ನು ಬಾಕಿ ಇಡಲಾಗಿರುತ್ತದೆ.

ಈ ಸಂಬಂಧ ಚಾಮರಾಜನಗರ ಜಿಲ್ಲೆಯಲ್ಲಿ 2011-12ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಸಣ್ಣ ಕೆರೆಗಳ ಹೂಳೆತ್ತುವ ಕಾಮಗಾರಿಗಳ ಅನುಷ್ಠಾನದಲ್ಲಿ ಆಗಿರುವ ಲೋಪದೋಷ ಹಾಗೂ ಹಣ ದುರುಪಯೋಗ ಕುರಿತು ತನಿಖೆ ನಡೆಸಲು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಂದ ತನಿಖೆ ವರದಿ ಪಡೆಯಲು ಸರ್ಕಾರವು ತೀರ್ಮಾನಿಸಿದೆ.

ಆದ್ದರಿಂದ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:134/1:ಆರ್‌ಆರ್‌ಸಿ:2013, ಬೆಂಗಳೂರು, ದಿನಾಂಕ:29-9-2015.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಚಾಮರಾಜನಗರ ಜಿಲ್ಲೆಯಲ್ಲಿ 2011-12ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಸಣ್ಣ ಕೆರೆಗಳ ಹೂಳೆತ್ತುವ ಕಾಮಗಾರಿಗಳ ಅನುಷ್ಠಾನದಲ್ಲಿ ಆಗಿರುವ ಲೋಪದೋಷ ಹಾಗೂ ಹಣ ದುರುಪಯೋಗ ಕುರಿತು ತನಿಖೆ ನಡೆಸಲು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರು ಕಾಮಗಾರಿಗಳ ಅನುಷ್ಠಾನದಲ್ಲಿ ಆದ ಲೋಪದೋಷ, ಹಣ ದುರುಪಯೋಗ, ಸರ್ಕಾರಕ್ಕಾದ ನಷ್ಟ ಹಾಗೂ ಇದಕ್ಕೆ ಕಾರಣರಾದ ಅಧಿಕಾರಿ/ನೌಕರರ ವಿವರಗಳ ಕುರಿತು ಸಮಗ್ರ ತನಿಖೆ ನಡೆಸಿ, ವರದಿಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

29/9/15

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಚಾಮರಾಜನಗರ.
5. ನಿರ್ದೇಶಕರು, ಸುವರ್ಣ ಗ್ರಾಮೋದಯ ಯೋಜನೆ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರಿಗೆ.
6. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಾಮರಾಜನಗರ.
7. ಜಂಟಿ ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಭರವಸೆ ಸಮಿತಿ, ವಿಧಾನ ಸೌಧ, ಬೆಂಗಳೂರು.
8. ರಕ್ಷಾ ಕಡತ/ಹೆಚ್ಚುವರಿ ಪ್ರತಿ.